## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎಂ.ಇಲಿಯಾಸ್, ಇವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಂಜಿನಿಯರಿಂಗ್ ಉಪವಿಭಾಗ, ಯಲಬುರ್ಗಾ ಇಲ್ಲಿ ಕಿರಿಯ ಇಂಜಿನಿಯರ್ ಹುದ್ದೆಯಲ್ಲಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ಅವರ ಉಸ್ತುವಾರಿಯಲ್ಲಿ ನಿರ್ವಹಿಸಿದ ಕಾಮಗಾರಿಗಳನ್ನು ತನಿಖೆ/ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ-ಆದೇಶ.

ಓದಲಾಗಿದೆ

1. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ಇವರ ಅ.ಸ.ಪ.ಸಂಖ್ಯೆ:ಕಂಪ್ಲೇಟ್/ಉಪಲೋಕ್/ಜಿ.ಎಲ್.ಬಿ-1281/2016/ಎಆರ್ಇ-5, ದಿನಾಂಕ:.25.3.2017.
2. ಮಾನ್ಯ ಉಪ ಲೋಕಾಯುಕ್ತ-1ರವರ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ವರದಿ ಸಂಖ್ಯೆ: ಕಂಪ್ಲೇಟ್/ಉಪಲೋಕ್/ಜಿ.ಎಲ್.ಬಿ-1281/2016/ಎಆರ್ಇ-5, ದಿನಾಂಕ:.22.3.2017.

ಪ್ರಸ್ತಾವನೆ:-

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ದಿನಾಂಕ:25.3.2017 ರ ಅರೆ ಸರ್ಕಾರಿ ಪತ್ರದ ಜೊತೆ ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ಮಾನ್ಯ ಉಪ ಲೋಕಾಯುಕ್ತ-1ರವರ ದಿನಾಂಕ:22.3.2017 ರ ಲೋಕಾಯುಕ್ತ ಕಾಯ್ದೆಯ ಕಲಂ 12(3)ರ ವರದಿ ಹಾಗೂ ಇತರೆ ದಾಖಲೆಗಳನ್ನು ಲಗತ್ತಿಸಿ, ಸರ್ಕಾರಕ್ಕೆ ಕಳುಹಿಸಿ, ಮಾನ್ಯ ಉಪ ಲೋಕಾಯುಕ್ತ-1ರವರ ವರದಿಯನುಸಾರ ಕೂಡಲೇ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರ ಕಲಂ 12(3) ರ ವರದಿಯನ್ನು ಪರಿಶೀಲಿಸಲಾಗಿ, ಶ್ರೀ ಎಂ.ಇಲಿಯಾಸ್, ಇವರು ಯಲಬುರ್ಗಾ ತಾಲ್ಲೂಕು ಪಂಚಾಯತ್ ವ್ಯಾಪ್ತಿಯಲ್ಲಿ ಕಿರಿಯ ಇಂಜಿನಿಯರ್ ಹುದ್ದೆಯಲ್ಲಿ ಅರ್ಹತೆ ಇಲ್ಲದಿದ್ದರೂ ಕಾರ್ಯನಿರ್ವಹಿಸಿದ್ದು, ಅವರು ಮೇಲ್ವಿಚಾರಣೆ ಮಾಡಿದ ಕಾಮಗಾರಿಗಳ ವಿವರಗಳನ್ನು ಕಳುಹಿಸಿ, ಹೇಳಿಕೆ ನೀಡಲು ಕೋರಲಾಗಿತ್ತೆಂದು, ಆದರೆ ಸದರಿಯವರು ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲವೆಂದು ತಿಳಿಸುತ್ತಾ, ಅವರು ಕಿರಿಯ ಇಂಜಿನಿಯರ್ ಹುದ್ದೆಗೆ ಅರ್ಹವಿಲ್ಲದ್ದಿದ್ದರೂ ಕಿರಿಯ ಇಂಜಿನಿಯರ್‌ಆಗಿ ಉಸ್ತುವಾರಿ ಮೇಲ್ವೇಚಾರಣೆ ಮಾಡಿದ್ದು, ಕಿರಿಯ ಇಂಜಿನಿಯರ್ ಹುದ್ದಗೆ ಪ್ರದತ್ತವಾದ ಕಾರ್ಯಗಳನ್ನು/ಕಾಮಗಾರಿಗಳನ್ನು ನಿರ್ವಹಿಸುವ ಮೂಲಕ ಸದರಿಯವರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ರ ನಿಯಮ 3(1)ನ್ನು ಉಲ್ಲಂಘಿಸಿರುತ್ತಾರೆಂದು ಆದ್ದರಿಂದ ಅವರು ಮೇಲ್ವಿಚಾರಣೆ/ಉಸ್ತುವಾರಿ ವಹಿಸಿದ್ದ ಕಾಮಗಾರಿಗಳ ಕುರಿತು ವಿಚಾರಣೆ ಕೈಗೊಳ್ಳಲು ಪ್ರಕರಣವನ್ನು ತಮಗೆ ವಹಿಸುವಂತೆ ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿದ್ದು, ಶ್ರೀ ಎಂ. ಇಲಿಯಾಸ್ ಇವರು 2005-06 ನೇ ಸಾಲಿನಿಂದ ಕಿರಿಯ ಇಂಜಿನಿಯರ್ ಹುದ್ದೆಯಲ್ಲಿ ಕಾರ್ಯನಿರ್ವಹಿಸಿರುತ್ತಾರೆ. ಅ ಅವದಿಯಿಂದ ಅವರು ಉಸ್ತುವಾರಿಯನ್ನು ವಹಿಸಿದ್ದ ಕಾಮಗಾರಿಗಳನ್ನು ಮಾನ್ಯ ಉಪಲೋಕಾಯುಕ್ತರು ವಿಚಾರಣೆ ನಡೆಸಲು ಉದ್ದೇಶಿಸಿರುವುದು ಕಂಡು

ಬರುತ್ತದೆ. ಶ್ರೀ ಎಂ. ಇಲಿಯಾಸ್ ಇವರು ಕಿರಿಯ ಇಂಜಿನಿಯರ್ ಹುದ್ದೆಯಲ್ಲಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ಅವರ ಉಸ್ತುವಾರಿಯೊಂದಿಗೆ ನಿರ್ಮಾಣಗೊಂಡಿರುವ ಕಾಮಗಾರಿಗಳ ಕುರಿತು ವಿವರವಾದ ಇಲಾಖೆ ವಿಚಾರಣೆಯನ್ನು ಕೈಗೊಳ್ಳುವುದು ಅಗತ್ಯವೆಂದು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ.

**ಆದೇಶ ಸಂಖ್ಯೆ:ಗ್ರಾಅಪ 41 ಇಎನ್‌ಕ್ಯೂ 17, ಬೆಂಗಳೂರು, ದಿನಾಂಕ:25.4.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಶ್ರೀ ಎಂ. ಇಲಿಯಾಸ್, ಇವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಯಲಬುರ್ಗಾ ಇಲ್ಲಿನ ಕಿರಿಯ ಇಂಜಿನಿಯರ್ ಹುದ್ದೆಯಲ್ಲಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ಅವರ ಉಸ್ತುವಾರಿಯಲ್ಲಿ ನಿರ್ವಹಣೆ ಮಾಡಲಾದ ಕಾಮಗಾರಿಗಳ ಕುರಿತು ವಿವರವಾದ ಇಲಾಖೆ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 11 ರಡಿ ನಡೆಸುವ ಸಲುವಾಗಿ ಸದರಿ ನಿಯಮಗಳ ನಿಯಮ 14-ಎ ರ ಅನುಸಾರ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
25/04/20
(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಅಪರ ನಿಬಂಧಕರು ವಿಚಾರಣೆಗಳು-5, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು
8. ಸಂಬಂಧಿಸಿದ ನೌಕರರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲ ಪಂಚಾಯತ್, ಕೊಪ್ಪಳ ಇವರ ಮುಖಾಂತರ)
9. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
10. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ /ಜಂಟಿ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
11. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.